ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಗಳನ್ನು ವರುಷಕ್ಕೆ 3 ಬಾರಿ ನಡೆಸುವ ಬಗ್ಗೆ.

೭೭. ಶ್ರೀ ಪ್ರಭಾಕರ ಎಸ್. ರಾಣಿ.—ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಪ್ರತಿವರ್ಷ ಬೆರಳಚ್ಚು ಮತ್ತು ಶೀಘ್ರಲಿಪಿಗಾರರ ಪರೀಕ್ಷೆಗೆ ಕುಳಿತುಕೊಳ್ಳುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಸದರಿ ಪರೀಕ್ಷೆ ಮತ್ತು ವಿಶ್ವವಿದ್ಯಾನಿಲಯಗಳ ಪರೀಕ್ಷೆಗಳು ಏಕಕಾಲದಲ್ಲಿ ನಡೆಯುತ್ತಿರುವುದು. ಇದರಿಂದ ಈ ಪರೀಕ್ಷೆಗಳಿಗೆ ಕುಳಿತುಕೊಳ್ಳದು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಹಾಲಿ ವರ್ಷಕ್ಕೆ ಎರಡು ಬಾರಿ ನಡೆಯುತ್ತಿರುವ ಶೀಘ್ರಲಿಪಿ ಹಾಗೂ ಬೆರಳಚ್ಚುಗಾರರ ಪರೀಕ್ಷೆಯನ್ನು ಮೂರರಂ ಬಾರಿ ನಡೆಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಮಂತ್ರಿಗಳು).—

ಅ) ಹೌದು.

ಆ) ಹೌದು.

ಇ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ನಿಯಮಾವಳಿ ಪ್ರಕಾರ ವರ್ಷಕ್ಕೆ ಮೂರು ಬಾರಿ ಪರೀಕ್ಷೆ ನಡೆಸಲು ಅವಕಾಶವಿರುವುದಿಲ್ಲ.

ವರ್ತೂರು ಹೋಬಳಿ ಏತ ನೀರಾವರಿ ಯೋಜನೆ

೧೦೩. ಶ್ರೀ ಎ. ಕೃಷ್ಣಪ್ಪ (ವರ್ತೂರು).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ಜಿಲ್ಲಾ ಗ್ರಾಮಾಂತರ ವರ್ತೂರು ಹೋಬಳಿಯಲ್ಲಿ ಏತ ನೀರಾವರಿ ಯೋಜನೆಯನ್ನು ಸರ್ಕಾರದವರು ಮಂಜೂರು ಮಾಡಿದ್ದರೂ ಇದು ಇದುವರೆವಿಗೂ ಪೂರ್ಣಗೊಳ್ಳದಿರಲು ಕಾರಣವೇನು,

ಆ) ಈ ಏತ ನೀರಾವರಿ ಯೋಜನೆಯು ಎಂದು ಪೂರ್ಣಗೊಳ್ಳುತ್ತದೆ.

ಶ್ರೀ ಹೆಚ್.ಡಿ. ದೇವೇಗೌಡರು (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ವರ್ತೂರು ಹೋಬಳಿಯಲ್ಲಿ ಎರಡು ಏತ ನೀರಾವರಿ ಯೋಜನೆಗಳು ಮಂಜೂರಾಗಿದ್ದು, ಇವುಗಳ ಪೈಕಿ ಹೆರಳೂರು ಗ್ರಾಮದ ಬಳಿ ಮಂಜೂರಾಗಿರುವ ಏತ ನೀರಾವರಿ ಯೋಜನೆ ಪೂರ್ಣಗೊಂಡಿರುತ್ತದೆ ಮತ್ತು ದೊಡ್ಡ ಕನ್ನಲ್ಲಿ ಗ್ರಾಮದ ಬಳಿ ಮಂಜೂರಾಗಿರುವ ಏತ ನೀರಾವರಿ ಯೋಜನೆಯು ಕಾಮಗಾರಿಯು ಭೂ ಸ್ವಾಧೀನದ ತೊಂದರೆಯಿಂದ ಪೂರ್ಣವಾಗಿಲ್ಲ.

ಆ) ೧೯೮೮ರ ಆಗಸ್ಟ್‌ರೊಳಗಾಗಿ ದೊಡ್ಡ ಕನ್ನಲ್ಲಿ ಗ್ರಾಮದ ಏತ ನೀರಾವರಿ ಯೋಜನೆಯನ್ನು ಪೂರ್ಣಗೊಳಿಸಲು ಯೋಜಿಸಲಾಗಿದೆ.